ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ : ಸಿ5(2)ಪವ್ಯ.ಬಿ.35/2020-21 ದಿನಾಂಕ: 18-01-2021

***ಅಧಿಸೂಚನೆ***

ವಿಷಯ :- ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧೀಕ್ಷಕರುಗಳಿಗೆ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು (ಬೋಧಕೇತರ)ಹುದ್ದೆಗೆ ಪದೋನ್ನತಿ ನೀಡುವ ಕುರಿತು.

ಉಲ್ಲೇಖ :- ಸರ್ಕಾರದ ಆದೇಶ ಸಂಖ್ಯೆ : ಡಿಪಿಎಆರ್ 12 ಎಸ್‌ಡಿಇ 2005 ದ: 29-01-2008.

2 :- ಸರ್ಕಾರದ ಆದೇಶ ಸಂಖ್ಯೆ : ಇಡಿ 464 ಡಿಪಿಐ 2008 ದಿ : 06-01-2009.

3 :- ದಿನಾಂಕ : 02-01-2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡವಳಿಗಳು.

4:- ಈ ಕಛೇರಿಯ ಅಧಿಸೂಚನೆ ದಿನಾಂಕ::02-01-2021. ಮತ್ತು 12-01-2021.

* * * * * *

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಗ್ರೂಪ್ 'ಬಿ' ವೃಂದದ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು (ಭೋದಕೇತರ) ವೃಂದಕ್ಕೆ ಉಲ್ಲೇಖಿತ (1) ರ ಸರ್ಕಾರದ ಆದೇಶದಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರನ್ನು ನೇಮಕಾತಿ ಪ್ರಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಬಡ್ತಿಯನ್ನು ನೀಡುವ ಸಲುವಾಗಿ ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ಉಲ್ಲೇಖಿತ (2) ರ ಸರ್ಕಾರದ ಆದೇಶದಲ್ಲಿ ರಚಿಸಿ ಆದೇಶಿಸಲಾಗಿದೆ. ಅದರಂತೆ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಪತ್ರಾಂಕಿತ ವ್ಯವಸ್ಥಾಪಕರ/ಸಹಾಯಕ ನಿರ್ದೇಶಕರು (ಭೋದಕೇತರ) ಹುದ್ದೆಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ಅಧೀಕ್ಷಕರ ಹುದ್ದೆಯಿಂದ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಂತೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ದಿನಾಂಕ: 02-01-2021 ರಂದು ನಡೆದ ಇಲಾಖಾ ಮುಂಬಡ್ತಿ ಸಭೆಯಲ್ಲಿ 18 ಅರ್ಹ ಅಧೀಕ್ಷಕರುಗಳಿಗೆ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರ ಹುದ್ದೆಗೆ ಮುಂಬಡ್ತಿ ನೀಡಲು ತೀರ್ಮಾನಿಸಲಾಗಿತ್ತು.

ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್ 'ಸಿ' ವೃಂದದ ವೇತನ ಶ್ರೇಣಿ ರೂ. 37900-70850 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಅಧೀಕ್ಷಕರುಗಳಿಗೆ ಗ್ರೂಪ್ 'ಬಿ' ವೃಂದದ ವೇತನ ಶ್ರೇಣಿ ರೂ. 40900-78200 ರ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರು (ಬೋಧಕೇತರ) ಹುದ್ದೆಗಳಿಗೆ ಇಲಾಖಾ ಮುಂಬಡ್ತಿ ಸಮಿತಿಯ ನಿರ್ಣಯದಂತೆ ಉಲ್ಲೇಖ [4] ರ ಪತ್ರದ ದಿನಾಂಕ: 02-01-2021 ರಂದು 18 ಮಂದಿ ನೌಕರರಿಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಆದೇಶಿಸಲಾಗಿತ್ತು. ಬಡ್ತಿ ಹೊಂದಿದ 18 ನೌಕರರಿಗೆ ಕರ್ನಾಟಕ ಸಿವಿಲ್ ಸೇವಾ [ಸಾಮಾನ್ಯ ನೌಕರಿ ಭರ್ತಿ] ನಿಯಮಗಳು-1977ರ ನಿಯಮ 4ಎ ರಂತೆ ಬಡ್ತಿ ಮುಂದೂಡಲು ಇಚ್ಛಿಸುವವರು ಇದ್ದಲ್ಲಿ ನೇಮಕ ಪ್ರಾಧಿಕಾರ ಅನುಮತಿಯನ್ನು ಕೋರಿ ಲಿಖಿತ ಕೋರಿಕೆ ಸಲ್ಲಿಸುವಂತೆ ಸೂಚಿಸಲಾಗಿತ್ತು. ಅದರನ್ವಯ 04 ಮಂದಿ ನೌಕರರು ಬಡ್ತಿಯನ್ನು ಮುಂದೂಡಲು ಪ್ರಾಧಿಕಾರಕ್ಕೆ ಮನವಿಯನ್ನು ಸಲ್ಲಿಸಿರುತ್ತಾರೆ. ಸದರಿ ಮನವಿಗಳನ್ನು ನಿಯಮಾನುಸಾರ ಪರಿಶೀಲಿಸಿ ಬಡ್ತಿಯನ್ನು ಮುಂದೂಡಲು ಅನುಮತಿ ನೀಡಿ ದಿನಾಂಕ :12-01-2021 ರಂದು ಆದೇಶ ಹೊರಡಿಸಲಾಗಿದೆ.

ಮುಂದುವರೆದು, ಬಡ್ತಿ ಮುಂದೂಡಿರುವುದರಿಂದ ಉದ್ಭವವಾದ 04 ಹುದ್ದೆಗಳಿಗೆ ಉಲ್ಲೇಖ [3] ರ ದಿನಾಂಕ: 02-01-2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯಲ್ಲಿ ತೀರ್ಮಾನಿಸಿರುವಂತೆ, ಉಳಿದ ಈ ಕೆಳಕಂಡ 04 ಮಂದಿ ಅರ್ಹ ಗ್ರೂಪ್ 'ಸಿ' ವೃಂದದ ವೇತನ ಶ್ರೇಣಿ ರೂ. 37900-70850 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧೀಕ್ಷಕರುಗಳಿಗೆ ಗ್ರೂಪ್ 'ಬಿ' ವೃಂದದ ವೇತನ ಶ್ರೇಣಿ ರೂ. 40900-78200 ರ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರು (ಬೋಧಕೇತರ) ಹುದ್ದೆಗಳಿಗೆ ಮುಂಬಡ್ತಿ ನೀಡಿ ಆದೇಶಿಸಿದೆ.

ಈ ಅಧಿಕಾರಿಗಳಿಗೆ ಸ್ಥಳ ನಿಯುಕ್ತಿ ಆದೇಶವನ್ನು ಹೊರಡಿಸಿದ ನಂತರ ಮುಂಬಡ್ತಿ ಹುದ್ದೆಯಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಆರ್ಥಿಕ ಸೌಲಭ್ಯಕ್ಕೆ ಅರ್ಹರಾಗುತ್ತಾರೆ. ಬಡ್ತಿ ಹೊಂದಿದ ಅಧಿಕಾರಿಗಳಿಗೆ ಈ ಬಡ್ತಿ ಆದೇಶ ಹೊರಡಿಸಿದ ನಂತರ ಅವರುಗಳ ಜೇಷ್ಠತೆ ಅನುಸಾರ ಹಾಗೂ ಸರ್ಕಾರದ ಆದೇಶ ಸಂಖ್ಯೆಸಿಆಸುಇ 18 ಸೇನೌವ 2014 ದಿನಾಂಕ: 06-02-2014 ರ ಅದೇಶದಂತೆ ಅಂಗವಿಕಲ ನೌಕರರಿಗೆ ಆದ್ಯತೆ ನೀಡಿ ಕೌನ್ಸಿಲಿಂಗ್ ಮುಖೇನ ಸ್ಥಳವನ್ನು ಆಯ್ಕೆಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗುವುದು.

ಕರ್ನಾಟಕ ಸಿವಿಲ್ ಸೇವಾ [ಸಾಮಾನ್ಯ ನೌಕರಿ ಭರ್ತಿ] ನಿಯಮಗಳು-1977ರ ನಿಯಮ 4ಎ ರಂತೆ ಬಡ್ತಿ ಮುಂದೂಡಲು ಇಚ್ಛಿಸುವವರು ಇದ್ದಲ್ಲಿ ದಿನಾಂಕ:21-01-2021 ರೊಳಗೆ ನೇಮಕ ಪ್ರಾಧಿಕಾರ ಅನುಮತಿಯನ್ನು ಕೋರಿ ಲಿಖಿತ ಕೋರಿಕೆ ಸಲ್ಲಿಸುವಂತೆ ಸೂಚಿಸಿದೆ.

| ಕ್ರಮ ಸಂಖ್ಯೆ | ಜೇಷ್ಠತಾ ಸಂಖ್ಯೆ | ಅಧೀಕ್ಷಕರ ಹೆಸರು<br>ಶ್ರೀ / ಶ್ರೀಮತಿ |
|---|---|---|
| 1. | 403 | ಮಹದೇವಸ್ವಾಮಿ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಟಿ. ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ. |
| 2 | 410 | ಶಿವಪ್ರಸಾದ್.ಕೆ. ಅಧೀಕ್ಷಕರು, ಜಿಲ್ಲಾ ಶಿಕ್ಷಣ ಮತ್ತು ತಬೇತಿ ಸಂಸ್ಥೆ, ಚಿತ್ರದುರ್ಗ ಜಿಲ್ಲೆ. |
| 3 | 411 | ಜಿ.ಎಸ್.ಸಿದ್ದೇಶ್ವರ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ದಾವಣಗೆರೆ ಉತ್ತರ ವಲಯ, ದಾವಣಗೆರೆ. |
| 4 | 413 | ಬಿ.ಎಸ್.ಶಿವರಾಜೇಂದ್ರ ಪ್ರಸಾದ್, ಅಧೀಕ್ಷಕರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು. |

ಸ್ಥಾನಪನ್ನ ಬಡ್ತಿ ಹೊಂದಿದ ನೌಕರರುಗಳಿಗೆ ದಿನಾಂಕ: 22-01-2020 ರಂದು ಬೆಳಗ್ಗೆ 11-00 ಗಂಟೆಗೆ ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇಲ್ಲಿ ಸ್ಥಳ ನಿಯುಕ್ತಿಗೆ ಕೌನ್ಸಿಲಿಂಗ್ ನಡೆಸಲಾಗುವುದು. ನೌಕರರು ನಿಗಧಿತ ದಿನಾಂಕದಂದು ಕೌನ್ಸಿಲಿಂಗ್‌ಗೆ ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಳ್ಳಲು ಸೂಚಿಸಿದೆ.

(ವಿ.ಅನ್ಬುಕುಮಾರ್)
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಇವರಿಗೆ,

1. ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರಿಗೆ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ
3. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ನೃಪತುಂಗ ರಸ್ತೆ, ಬೆಂಗಳೂರು.
4. ಸಂಬಂಧಿಸಿದ ಜಿಲ್ಲಾ ಪಂಚಾಯತಿ ಕಾರ್ಯನಿರ್ವಹಣಾಧಿಕಾರಿಗಳಿಗೆ.
5. ನಿರ್ದೇಶಕರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ನಿರ್ದೇಶಕರು, ರಾಜ್ಯ ಶಿಕ್ಷಣ ಮತ್ತು ಸಂಶೋಧನೆ ತರಬೇತಿ ಇಲಾಖೆ, 100 ಅಡಿ ವರ್ತುಲ ರಸ್ತೆ, ಹೊಸಕರೆಹಳ್ಳಿ, ಬನಶಂಕರಿ, ಬೆಂಗಳೂರು.
7. ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ [ರಿ] 100 ಅಡಿ ವರ್ತುಲ ರಸ್ತೆ, ಹೊಸಕೆರೆಹಳ್ಳಿ, ಬನಶಂಕರಿ, ಬೆಂಗಳೂರು.
8. ನಿರ್ದೇಶಕರು [ಪರೀಕ್ಷೆಗಳು] ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು.
9. ವಿಭಾಗೀಯ ಸಹ ನಿರ್ದೇಶಕರು-1, ಬೆಂಗಳೂರು ವಿಭಾಗ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
10. ವಿಭಾಗೀಯ ಸಹ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ವಿಭಾಗ, ಮೈಸೂರು.
11. ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು.
12. ಸಂಬಂಧಿಸಿದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳಿಗೆ,
13. ಸಂಬಂದಿಸಿದ ಎಲ್ಲಾ ಪ್ರಾಂಶುಪಾಲರು ಹಾಗೂ ಪದನಿಮಿತ್ತ ಉಪ ನಿರ್ದೇಶಕರು[ಅಭಿವೃದ್ಧಿ] ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, [ಡಯಟ್]
14. ಈ ಕಛೇರಿಯ ಎಲ್ಲಾ ಶಾಖಾಧಿಕಾರಿಗಳಿಗೆ,
15. ಸಂಬಂಧಿಸಿದ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ,
16. ಈ ಅಧಿಸೂಚನೆಯನ್ನು ಇಲಾಖಾ ವೆಬ್ ಸೈಟ್-www.schooleducation.kar.in "ನಲ್ಲಿ ಪ್ರಕಟಿಸಲಾಗಿದೆ.
17. ಸಂಬಂಧಿಸಿದ ಅಧೀಕ್ಷಕರುಗಳಿಗೆ.
18. ಕಛೇರಿ ಪ್ರತಿ.